ಓ ಎಸ್ ನಂ. 24/2022

ಡಿ ಡಬ್ಲ್ಯು 2

ದಿನಾಂಕ 22-01-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲುಃ ವಾದಿ ಪರಃ ಶ್ರೀಮತಿ ಡಿ ಸಿ ಎಸ್ ವಕೀಲರಿಂದಃ

ಈ ದಾವೆಯ ಪ್ರತಿವಾದಿಗಳು ನನ್ನ ಸಂಬಂಧಿಕರು ಎಂದರೆ ಸಾಕ್ಷಿ ಅವರು ನಮ್ಮ ಜನಾಂಗದವರು ಅಷ್ಟೇ ಎಂದು ನುಡಿಯುತ್ತಾರೆ. ಪ್ರತಿವಾದಿಗಳ ಜತೆ ನಾನು ವಿಶ್ವಾಸದಿಂದ ಇದ್ದೇನೆ ಎಂದರೆ ಸಾಕ್ಷಿ ಒಂದೇ ಊರಿನವರಾಗಿದ್ದು ವಿಶ್ವಾಸದಿಂದ ಇದ್ದೇವೆ ಎಂದು ನುಡಿಯುತ್ತಾರೆ. 1 ನೇ ವಾದಿಯ ಗಂಡ ವೆಂಕಟಪ್ಪ ಮತ್ತು ಪ್ರತಿವಾದಿಗಳು ಉದ್ದೇರಂಗಪ್ಪರವರ ಕುಟುಂಬದವರು ಎಂದರೆ ಸರಿ. ಸದರಿ ಉದ್ದೇರಂಗಪ್ಪರವರ ಕುಟುಂಬಕ್ಕೆ ಒಟ್ಟು ಎಷ್ಟು ಆಸ್ತಿಗಳು ಇದ್ದವು ಎಂದರೆ ಸಾಕ್ಷಿ ವೈ ಬಸವನಹಳ್ಳಿ ಗ್ರಾಮದ ಸರ್ವೆ ನಂ.8 ರಲ್ಲಿ 4 ಎಕರೆ ಮತ್ತು ಸರ್ವೆ ನಂ.6 ರಲ್ಲಿ 3 ಎಕರೆ ಎಂದು ನುಡಿಯುತ್ತಾರೆ. ಸದರಿ ಆಸ್ತಿಗಳು ಅವರ ಪಿತ್ರಾರ್ಜಿತ ಆಸ್ತಿಗಳು ಎಂದರೆ ಸರಿ. ಸರ್ವೆ ನಂ.8 ರ ಪೂರ್ವಕ್ಕೆ ಚೌಡಯ್ಯ ಕೆರೆ, ಪಶ್ಚಿಮಕ್ಕೆ ಗಂಗಪ್ಪರವರ ಜಮೀನು, ಉತ್ತರಕ್ಕೆ ಬಂಡಿದಾರಿ ಮತ್ತು ದಕ್ಷಿಣಕ್ಕೆ ಬಂಡಿಜಾಡು ಇದೆ. ಮೂಲ ದಾಖಲಾತಿಗಳು ಉದ್ದೇರಂಗಪ್ಪರವರ ಹೆಸರಿನಲ್ಲಿದೆ ಎಂದರೆ ಸಾಕ್ಷಿ ಇಲ್ಲ ಈಗ ಅವರ ಮಕ್ಕಳು ಆಸ್ತಿಗಳನ್ನು ಹಂಚಿಕೊಂಡಿರುತ್ತಾರೆ ಎಂದು ನುಡಿಯುತ್ತಾರೆ. ಅವರ ಕುಟುಂಬದಲ್ಲಿ ಯಾವುದೇ ವಿಭಾಗ ಆಗಿಲ್ಲ ಎಂದರೆ ಸರಿಯಲ್ಲ.

ವಿಭಾಗದ ಬಾಬ್ತು ದಾಖಲೆಯನ್ನು ನಾನು ನೋಡಿರುತ್ತೇನಾ ಎಂದರೆ ಸಾಕ್ಷಿ ಇಲ್ಲ ಬಾಯಿಮಾತಿನಲ್ಲಿ ವಿಭಾಗ ಆಗಿದೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಗಳಲ್ಲಿ ವಾದಿ ಮತ್ತು ಪ್ರತಿವಾದಿಗಳು ಜಂಟಿ ಸ್ವಾಧೀನ ಹೊಂದಿರುತ್ತಾರೆ  ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಮೂರು ಭಾಗ ಮಾಡಿಕೊಂಡು ವೆಂಕಟಪ್ಪರವರ ಭಾಗವನ್ನು ಅವರು ಮಾರಾಟ ಮಾಡಿರುತ್ತಾರೆ ಎಂದು ನುಡಿಯುತ್ತಾರೆ. ಆ ರೀತಿ ವೆಂಕಟಪ್ಪರವರು ಯಾವ ದಿನಾಂಕದಂದು ಮಾರಾಟ ಮಾಡಿರುತ್ತಾರೆ ಎಂದರೆ ಸಾಕ್ಷಿ ಅದರ ಬಗ್ಗೆ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಕ್ರಯಪತ್ರಕ್ಕೆ ಯಾರು ಯಾರು ಸಾಕ್ಷಿದಾರರಾಗಿ ಸಹಿ ಮಾಡಿದ್ದಾರೆ ಎಂದರೆ ಸಾಕ್ಷಿ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಯಾವ ಉದ್ದೇಶಕ್ಕೆ ಮಾರಾಟ ಮಾಡಿರುತ್ತಾರೆ ಎಂದರೆ ಸಾಕ್ಷಿ ಆರೋಗ್ಯ ಸಮಸ್ಯೆ ಇದ್ದ ಕಾರಣ ಮಾರಾಟ ಮಾಡಿದ್ದಾರೆ ಎಂದು ನುಡಿಯುತ್ತಾರೆ. ನಾನು ಹೇಳುವ ಕ್ರಯಪತ್ರವನ್ನು ಯಾರು ಬರೆದಿರುತ್ತಾರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ವೆಂಕಟಪ್ಪರವರು ಸರ್ಕಾರಿ ನೌಕರರಾಗಿದ್ದರು ಎಂದರೆ ಸರಿ. ಅವರು ಆರ್ಥಿಕವಾಗಿ ಚೆನ್ನಾಗಿದ್ದರೂ ಎಂದರೆ ಸಾಕ್ಷಿ ಇಲ್ಲ ಕಷ್ಟದಲ್ಲಿದ್ದರು ಎಂದು ನುಡಿಯುತ್ತಾರೆ. ವೆಂಕಟಪ್ಪರವರು ಆರ್ಥಿಕ ತೊಂದರೆಯಲ್ಲಿ ಇರಲಿಲ್ಲ ಮತ್ತು ಯಾವುದೇ ಆಸ್ತಿ ಮಾರಾಟ ಮಾಡಿಲ್ಲ ವಾದಿಗೆ ದಾವಾ ಆಸ್ತಿಗಳಲ್ಲಿ ಹಿಸ್ಸೆ ಕೊಡಬೇಕಾಗುತ್ತದೆ ಎಂದು ಕ್ರಯಪತ್ರವನ್ನು ಸೃಷ್ಟಿಸಲಾಗಿದೆ

ಎಂದರೆ ಸರಿಯಲ್ಲ. ವೆಂಕಟಪ್ಪರವರ ಜೀವಿತಾವಧಿಯಲ್ಲಿ ಯಾವುದೇ ರೀತಿಯ ವಿಭಾಗ ಅವರ ಕುಟುಂಬ ಆಗಿಲ್ಲ ಎಂದರೆ ಸಾಕ್ಷಿ ವಿಭಾಗ ಆಗಿದೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಗಳ ಖಾತೆಗಳು ಇಂದಿಗೂ ಸಹ ಜಂಟಿ ಖಾತೆಯಲ್ಲಿವೆ ಎಂದರೆ ಸಾಕ್ಷಿ ಇತ್ತೀಚೆಗೆ ಜಂಟಿ ಖಾತೆಯಾಗಿದೆ ಆದರೆ ಸ್ವಾಧೀನದಲ್ಲಿ ತಿಮ್ಮಪ್ಪನ ಮಕ್ಕಳು ಇದ್ದಾರೆ ಎಂದು ನುಡಿಯುತ್ತಾರೆ. ವಾದಿಗಳಿಗೆ ತೊಂದರೆ ಕೊಡುವ ಸಲುವಾಗಿ ನಿಡಿ-1ರ ಕ್ರಯಪತ್ರವನ್ನು ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ನನಗೆ ಯಾವುದೇ ವಿಚಾರ ಗೊತ್ತಿಲ್ಲದೆ ಇದ್ದರೂ ಸಹ ಪ್ರತಿವಾದಿಗಳ ಮಾತನ್ನು ಕೇಳಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಗಳಿಗೂ ಸಹ ದಾವಾ ಆಸ್ತಿಗಳಲ್ಲಿ ಸಮಾನವಾದ ಹಕ್ಕು ಮತ್ತು ಹಿಸ್ಸೆ ಇದೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

ಓ ಹೇ ಕೇ ಸ ಇ ಎ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ, ಕಡೂರು.